ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ಸಂಖ್ಯೆ:ತು.ವಿ:ಶೈ.ವಿ:ಪಿ.ಜಿ:2025-26/೩೬೮೪ ದಿನಾಂಕ:26.11.2025

**ಸುತ್ತೋಲೆ**

**ವಿಷಯ:** ಬಾಕಿ ಪ್ರವೇಶ ಶುಲ್ಕವನ್ನು ಪಾವತಿಸುವ ಕುರಿತು.

**ಉಲ್ಲೇಖ:**1. ಕುಲಸಚಿವರು(ಮೌ), ತು.ವಿ.ತು ಇವರ ಪತ್ರ ದಿನಾಂಕ:24.07.2025

2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:20.11.2025(ಕಂಡಿಕೆ-57)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2024-25 ನೇ ಶೈಕ್ಷಣಿಕ ಸಾಲಿನಲ್ಲಿ ವಿವಿಧ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳಿಗೆ ನಿಗದಿತ ಪ್ರವೇಶ ಶುಲ್ಕಕ್ಕಿಂತ ಕಡಿಮೆ ಮೊತ್ತವನ್ನು ಪಾವತಿಸಿ ಪ್ರವೇಶ ಪಡೆದ ವಿದ್ಯಾರ್ಥಿಗಳು 2024-25 ನೇ ಶೈಕ್ಷಣಿಕ ಹಾಗೂ ಹಣಕಾಸು ವರ್ಷ ಮುಕ್ತಾಯವಾಗಿದ್ದು 2025-26 ನೇ ಶೈಕ್ಷಣಿಕ ಮತ್ತು ಹಣಕಾಸು ವರ್ಷ ಪ್ರಾರಂಭವಾಗಿದ್ದರೂ ಸಹ ಇನ್ನೂ ಕೆಲವು ವಿಭಾಗಗಳ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ ಪ್ರವೇಶ ಶುಲ್ಕ ವಿಶ್ವವಿದ್ಯಾನಿಲಯಕ್ಕೆ ಸಂದಾಯವಾಗಿರುವುದಿಲ್ಲ.

ಪ್ರವೇಶಾತಿ ಶುಲ್ಕ ಬಾಕಿ ಉಳಿಸಿಕೊಂಡಿರುವ ವಿದ್ಯಾರ್ಥಿಗಳ ಫಲಿತಾಂಶವನ್ನು ತಡೆಹಿಡಿಯಬೇಕೆಂದು ಕುಲಸಚಿವರು(ಮೌ)ಇವರಿಗೆ ತಿಳಿಸಲಾಗಿತ್ತು. ಪ್ರವೇಶ ಶುಲ್ಕ ಪಾವತಿಸದ ವಿಭಾಗ/ಕಾಲೇಜುಗಳ ಹಾಗೂ ಪ್ರವೇಶಾನುಮೋದನೆಯಾಗದ ವಿದ್ಯಾರ್ಥಿಗಳ ಡೇಟಾಗಳನ್ನು ಯು.ಯು.ಸಿ.ಎಂ.ಎಸ್ ತಂತ್ರಾಂಶದಿಂದಲೇ ನಿರ್ಬಂದಿಸಲು ತಮ್ಮ ಹಂತದಲ್ಲಿ ಕ್ರಮಕೈಗೊಳ್ಳಬೇಕೆಂದು ಉಲ್ಲೇಖ(01) ರ ಪತ್ರದಲ್ಲಿ ಕುಲಸಚಿವರು(ಮೌ) ಇವರು ತಿಳಿಸಿರುತ್ತಾರೆ.

ಉಲ್ಲೇಖ(02)ರಲ್ಲಿ ಮಾನ್ಯ ಕುಲಪತಿಯವರು ಪ್ರವೇಶ ಶುಲ್ಕವನ್ನು ವಿದ್ಯಾರ್ಥಿಗಳಿಂದ ವಸೂಲಾತಿ ಮಾಡಿ ವಿಶ್ವವಿದ್ಯಾನಿಲಯಕ್ಕೆ ಪಾವತಿಸುವುದು ವಿಭಾಗಗಳ ಅಧ್ಯಕ್ಷರು/ಸಂಯೋಜಕರ ಜವಾಬ್ದಾರಿ ಎಂದು ತಿಳಿಸಿರುವ ಹಿನ್ನೆಲೆಯಲ್ಲಿ ಪ್ರವೇಶ ಶುಲ್ಕವನ್ನು ವಿದ್ಯಾರ್ಥಿಗಳಿಂದ ತುರ್ತಾಗಿ ವಿಶ್ವವಿದ್ಯಾನಿಲಯಕ್ಕೆ ಪಾವತಿಸಲು ಅಗತ್ಯ ಕ್ರಮವಹಿಸುವಂತೆ ತಿಳಿಸುತ್ತಾ, ಒಂದು ವೇಳೆ ಆಡಿಟ್ ಆಕ್ಷೇಪಣೆಯಾದರೆ ವಿಭಾಗಗಳ ಅಧ್ಯಕ್ಷರು/ಸಂಯೋಜಕರೇ ನೇರ ಜವಾಬ್ದಾರರಾಗಿರುತ್ತೀರೆಂದು ತಿಳಿಸಲು ಮಾನ್ಯ ಕುಲಪತಿಗಳಿಂದ ನಿರ್ದೇಶಿತನಾಗಿದ್ದೇನೆ.

ಆದೇಶದ ಮೇರೆಗೆ

ಉಪಕುಲಸಚಿವರು
ಸಹಾಯಕ ಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ

ಗೆ,

1. ಅಧ್ಯಕ್ಷರು / ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು, ತುಮಕೂರು. ವಿಶ್ವವಿದ್ಯಾನಿಲಯ, ತುಮಕೂರು
3. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ
4. ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತಿಪಟೂರು.

**ಪ್ರತಿಗಳು:**

1. ನೋಡಲ್ ಅಧಿಕಾರಿಗಳು, ಎಸ್.ಎಸ್.ಪಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2. ನೋಡಲ್ ಅಧಿಕಾರಿಗಳು, ಯು.ಯು.ಸಿ.ಎಂ.ಎಸ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
4. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ.